ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 9/3/21

ಸದನದಲ್ಲಿ ತಮ್ಮ ನಡೆಗೆ ಜಮೀರ್ ಕಾರಣವೆಂದ ಕೈ ಶಾಸಕ

# ಜಮೀರ್ ಮಾತು ಕೇಳಿ ಅಂಗಿ ಬಿಚ್ಚಿ ಸಸ್ಪೆಂಡಾದ ಸಂಗಮೇಶ್!

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಭದ್ರಾವತಿ ಶಾಸಕ ಬಿ.ಕೆ. ಸಂಗಮೇಶ್ ಸದನದಲ್ಲಿ ಶರ್ಟ್ ಕಳಚಿದ್ದಕ್ಕೆ ಶಾಸಕಾಂಗ ಪಕ್ಷದ ಸಭೆಯಲ್ಲಿ ಹಿರಿಯ ಸದಸ್ಯರು ಸಂಗಮೇಶ್ ಅವರನ್ನು ತರಾಟೆಗೆ ತೆಗೆದುಕೊಂಡಿದ್ದು, ಈ ವೇಳೆ ಮಾಜಿ ಸಚಿವ ಜಮೀರ್ ಅಹಮದ್‌ಖಾನ್ ಸಲಹೆಯಂತೆ ಶರ್ಟ್ ಬಿಚ್ಚಿರುವುದಾಗಿ ಸಂಗಮೇಶ್ ದೂರಿದ್ದಾರೆ.

ಸೋಮವಾರ ಸಂಜೆ ನಡೆದ ಶಾಸಕಾಂಗ ಪಕ್ಷದ ಸಭೆಯಲ್ಲಿ ಶರ್ಟ್ ಕಳಚಿದ ಸಂಗಮೇಶ್ ಬಗ್ಗೆ ಹಿರಿಯ ಸದಸ್ಯರು ಅಸಮಾಧಾನ ವ್ಯಕ್ತಪಡಿಸಿದರು. ಸದನಕ್ಕೆ ಅದರದ್ದೇ ಆದ ಗೌರವ ಇದೆ. ಸದನದಲ್ಲಿ ಶರ್ಟ್ ಬಿಚ್ಚುವ ಅಗತ್ಯವೇನಿತ್ತು. ಭದ್ರಾವತಿಯಲ್ಲಿ ಸಮಸ್ಯೆಯಾಗಿದ್ದರೆ ಸ್ಪೀಕರ್ ಅವರಿಗೆ ನೋಟಿಸ್ ನೀಡಿ ಮಾತನಾಡಲು ಅವಕಾಶ ಕೇಳಬೇಕು. ಈ ರೀತಿ ಮಾಡಿದರೆ ಪಕ್ಷದ ಮಾನ ಹರಾಜು ಹಾಕಿದಂತಾಗಲ್ಲವೇ ಎಂದು ಪ್ರಶ್ನಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಇನ್ನು ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಮಾಜಿ ಸ್ಪೀಕರ್ ಕೆ.ಆರ್.ರಮೇಶ್ ಕುಮಾರ್, ಜಮೀರ್



ಪ್ಯಾಂಟ್ ಬಿಚ್ಚಿ ಎಂದು ಹೇಳುತ್ತಾರೆ ನೀವು ಬಿಚ್ಚುತ್ತೀರಾ? ನಿಮಗೆ ಸದನ ನೀತಿ ನಿಯಮಗಳು ಗೊತ್ತಿಲ್ಲವೇ? ಎಂದು ತರಾಟೆಗೆ ತೆಗೆದುಕೊಂಡು ಎಂದು ತಿಳಿದುಬಂದಿದೆ.

**ಮಾ.13 ರಂದು ಶಿವಮೊಗ್ಗ ಚಲೋ:** ಸಂಗಮೇಶ್ ವಿರುದ್ಧ ಪೊಲೀಸ್ ದೌರ್ಜನ್ಯ ಖಂಡಿಸಿ ಮಾ.13ರಂದು ಶಿವಮೊಗ್ಗ ಚಲೋ ನಡೆಸಲು, ಹಾಗೂ ಈ ವೇಳೆ ಎಲ್ಲಾ ಶಾಸಕರು ಭಾಗವಹಿಸಲು ಸಭೆಯಲ್ಲಿ ತೀರ್ಮಾನಿಸಲಾಗಿದೆ.